ಕರ್ನಾಟಕ ಸರ್ಕಾರ
ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಅಡ್ಡ ರಸ್ತೆ, ಮಲ್ಲೇಶ್ವರ, ಬೆಂಗಳೂರು-560012.
ಇಮೈಲ್: commissioner.pue@gmail.com ದೂರವಾಣಿ: 080-23561944. ಫ್ಯಾಕ್ಸ್:23361852.
ಸಂಖ್ಯೆ:ಪಪೂಶಿಇ/ಕಟ್ಟಡ(3)/ಸುತ್ತೋಲೆ/ಇಡಿ132/2017-18. ದಿ: 14-12-2017

## ಸುತ್ತೋಲೆ

ವಿಷಯ: ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಆಸ್ತಿ ಮತ್ತು ಸ್ವತ್ತುಗಳ ಸಂರಕ್ಷಣೆಗೆ ಅಗತ್ಯ ಕ್ರಮ ವಹಿಸುವ ಕುರಿತು

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ132ಎಸ್‌ಟಿಬಿ 2016ಬೆಂಗಳೂರು ದಿ:04.11.2017

ಉಲ್ಲೇಖಿತ ಸುತ್ತೋಲೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರುರವರು ಪದವಿ ಪೂರ್ವ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಾರ್ವಜನಿಕರು/ ಸಂಘಸಂಸ್ಥೆಗಳು/ಗ್ರಾಮಸ್ಥರು ಸಾಕಷ್ಟು ಸ್ಥಳಗಳಲ್ಲಿ ಜಮೀನನ್ನು ಉಚಿತವಾಗಿ /ದಾನವಾಗಿ ನೀಡಿರುವುದು ಕಂಡು ಬಂದಿರುತ್ತದೆ.ಈ ಸಂಬಂಧ ಸದರಿ ಜಮೀನಿನ ಭೂದಾಖಲೆಗಳು ಆಯಾ ಇಲಾಖೆ ಮುಖ್ಯಸ್ಥರು/ಸಂಸ್ಥೆಗಳ ಹೆಸರಿಗೆ ವರ್ಗಾವಣೆಯಾಗದೆ ಒತ್ತುವರಿಯಾಗುತ್ತಿದ್ದು, ಇಲಾಖೆಯ ವಶದಿಂದ ಕೈಬಿಟ್ಟು ಹೋಗುವ ಸಂದರ್ಭವಿರುತ್ತದೆ. ಇದರಿಂದ ನ್ಯಾಯಾಲಯಗಳಲ್ಲಿ ವ್ಯಾಜ್ಯಗಳ ಹೂಡಿಕೆ ಹೆಚ್ಚಾಗುವ ಸಂದರ್ಭವಿರುತ್ತದೆ. ಇದಕ್ಕೆ ಅನುವು ಮಾಡಿಕೊಡದೇ ಭೂದಾಖಲೆಗಳನ್ನು ಶಿಕ್ಷಣ ಇಲಾಖೆ ಹೆಸರಿನಲ್ಲಿ ನಮೂದಿಸಲು ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ತಹಶೀಲ್ದಾರ್ / ಉಪವಿಭಾಗಾಧಿಕಾರಿಗಳು/ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಂತೆ ಹಾಗೂ ಸದರಿ ಸ್ವತ್ತುಗಳ ಸಂರಕ್ಷಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿರುತ್ತಾರೆ. ಸದರಿ ಸರ್ಕಾರದ ಸುತ್ತೋಲೆಯನ್ನು ಈ ಪತ್ರಕ್ಕೆ ಲಗತ್ತಿಸಿದೆ.ಸುತ್ತೋಲೆಯಂತೆ ಜಿಲ್ಲಾ ಉಪನಿರ್ದೇಶಕರುಗಳು ಕ್ರಮಕೈಗೊಳ್ಳಲು ಸೂಚಿಸಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಯನ್ನು:

1. ಪದವಿ ಪೂರ್ವ ಶಿಕ್ಷಣ ಇಲಾಖಾ ಜಿಲ್ಲಾ ಉಪನಿರ್ದೇಶಕರುಗಳಿಗೆ-ಮುಂದಿನ ಕ್ರಮಕ್ಕಾಗಿ.
2. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ-ಉಪನಿರ್ದೇಶಕರುಗಳ ಮುಖಾಂತರ.
3. ನಿರ್ದೇಶಕರ ಆಪ್ತ ಶಾಖೆಗೆ
4. ಕಛೇರಿ ಪ್ರತಿ.

(2)

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 132 ಎಸ್‌ಟಿಬಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:04.11.2017

**ಸುತ್ತೋಲೆ**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ, ಸಾರ್ವಜನಿಕ ಗ್ರಂಥಾಲಯ ಇಲಾಖೆಗಳಿಗೆ ಸಂಬಂಧಿಸಿದಂತೆ, ಇಲಾಖೆಯ ವಿವಿಧ ಉದ್ದೇಶಗಳಿಗಾಗಿ ಮೀಸಲಿರುವ/ ಮಂಜೂರಾಗಿರುವ ಹಾಗೂ ಸಾರ್ವಜನಿಕರು/ಸಂಘ ಸಂಸ್ಥೆಗಳು ದಾನವಾಗಿ ನೀಡಿರುವ ಎಲ್ಲ ಬಗೆಯ ನಿವೇಶನಗಳು ಮತ್ತು ಕಟ್ಟಡಗಳನ್ನು ಗುರುತಿಸುವ ಸಂರಕ್ಷಿಸುವ ಹಾಗೂ ಒತ್ತುವರಿಯಿಂದ ತೆರವುಗೊಳಿಸುವ ಬಗ್ಗೆ ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ, ಉಪ ನಿರ್ದೇಶಕರು, ಜಂಟಿ ನಿರ್ದೇಶಕರು ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಮುಖ್ಯ ಗ್ರಂಥಾಲಯಾಧಿಕಾರಿಗಳು/ ಉಪ ನಿರ್ದೇಶಕರು(ಪ್ರಭಾರ) ಇವರುಗಳು ಕ್ರಮ ವಹಿಸಬೇಕೆಂದು ಮಾನ್ಯ ಸಚಿವರು ಸೂಚಿಸಿರುತ್ತಾರೆ.

ಅದರಂತೆ, ಸರ್ಕಾರಿ ಶಾಲಾ ಕಾಲೇಜುಗಳಿಗೆ ಮತ್ತು ಶಿಕ್ಷಣ ಇಲಾಖೆಯ ವಿವಿಧ ಚಟುವಟಿಕೆ ಕಾರ್ಯಕ್ರಮಗಳ ಅಂಗವಾಗಿ ಸಾರ್ವಜನಿಕರು/ ಸಂಘ ಸಂಸ್ಥೆಗಳು/ ಗ್ರಾಮಸ್ಥರು ಸಾಕಷ್ಟು ಸ್ಥಳಗಳಲ್ಲಿ ಜಮೀನನ್ನು ಉಚಿತವಾಗಿ/ದಾನವಾಗಿ ನೀಡಿರುವುದು ಕಂಡುಬರುತ್ತದೆ. ಈ ಸಂಬಂಧ ಸದರಿ ಜಮೀನುಗಳ ಭೂದಾಖಲೆಗಳು ಆಯಾ ಶಾಲೆಗಳು/ಕಾಲೇಜುಗಳು/ಇಲಾಖೆಯ ಸಂಸ್ಥೆಗಳ ಹೆಸರಿಗೆ ವರ್ಗಾವಣೆಯಾಗದೆ ಒತ್ತುವರಿಯಾಗುತ್ತಿದ್ದು, ಶಾಲೆಯ/ಕಾಲೇಜು/ಇಲಾಖೆಯ ವಶದಿಂದ ಕೈಬಿಟ್ಟು ಹೋಗುವ ಸಂದರ್ಭವಿರುತ್ತವೆ. ಇದರಿಂದ ನ್ಯಾಯಾಲಯಗಳಲ್ಲಿ ವ್ಯಾಜ್ಯಗಳ ಹೂಡಿಕೆ ಹೆಚ್ಚಾಗುವ ಸಂಭವವಿರುತ್ತದೆ. ಆದುದರಿಂದ ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಶಾಲಾ ಮುಖ್ಯೋಪಾಧ್ಯಾಯರುಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉಪ ನಿರ್ದೇಶಕರುಗಳು, ಜಂಟಿ ನಿರ್ದೇಶಕರುಗಳು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ, ಉಪ ನಿರ್ದೇಶಕರುಗಳು, ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಸಂಬಂಧಿಸಿದಂತೆ ಮುಖ್ಯ ಗ್ರಂಥಾಲಯಾಧಿಕಾರಿಗಳು/ ಉಪ ನಿರ್ದೇಶಕರು(ಪ್ರಭಾರ) ಈ ಬಗ್ಗೆ ಭೂದಾಖಲೆಗಳನ್ನು ಶಿಕ್ಷಣ ಇಲಾಖೆಯ ಹೆಸರಿನಲ್ಲಿ ನಮೂದಿಸಲು ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ತಹಶೀಲ್ದಾರ್, ಉಪವಿಭಾಗಾಧಿಕಾರಿ ಮತ್ತು ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಂತೆ ಹಾಗೂ ಸದರಿ ಸ್ವತ್ತುಗಳ ಸಂರಕ್ಷಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದೆ.

C - 11824

(ಡಾ॥ ಶಾಲಿನಿ ರಜನೀಶ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಗೆ:

1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
4) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
5) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು

6) ರಾಜ್ಯ ಯೋಜನ ನಿರ್ದೇಶಕರು, ಎಸ್‌ಎಸ್‌ಎ/ಆರ್‌ಎಂಎಸ್‌ಎ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
7) ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು
8) ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ ಕಲಬುರ್ಗಿ/ ಧಾರವಾಡ

9) ರಾಜ್ಯದ ಎಲ್ಲಾ ಉಪ ನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ
10) ರಾಜ್ಯದ ಎಲ್ಲಾ ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ,
11) ರಾಜ್ಯದ ಎಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ
12) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ
13) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

} **ಆಯಾ ಇಲಾಖಾವಾರು ಮುಖ್ಯಸ್ಥರುಗಳಿಂದ ಕಳುಹಿಸುವುದು.**

ಪ್ರತಿ ಮಾಹಿತಿಗಾಗಿ:

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
2) ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ